ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು

ಸಂಖ್ಯೆ: ಕ.ರಾ.ಸ.ಮ/ಸಿ.ವಿ/ಸಿನೇ/2/2018–19 **ದಿನಾಂಕ: 14.02.2019**

ನೇಮಕಾತಿ ಪ್ರಕಟಣೆ

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದಲ್ಲಿ ಖಾಲಿ ಇರುವ ಈ ಕೆಳಕಂಡ ವಿವಿಧ ವೇತನ ಶ್ರೇಣಿಯ ಹುದ್ದೆಗಳಿಗೆ ನೇರ ನೇಮಕಾತಿಗಾಗಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಹುದ್ದೆಗಳ ವಿವರ ಈ ಕೆಳಕಂಡಂತಿದೆ.

ಸಂಪಾದಕರು,

ಕ್ರ. ಸಂ	ಹುದ್ದೆಯ ಹೆಸರು ಹಾಗೂ ವೇತನ ಶ್ರೇಣಿ	ಖಾಲಿ ಇರುವ ಸ್ಥಾನಗಳು ಹಾಗೂ ಮೀಸಲಾತಿ ವಿವರಗಳು								ಒಟ್ಟು ಹುದ್ದೆಗಳು
		ಸಾಮಾನ್ಯ	ಪ.ಜಾ	ಪ.ಪಂ	ಪ್ರವರ್ಗ 1	ಪ್ರವರ್ಗ 2ಎ	ಪ್ರವರ್ಗ 2ಬಿ	ಪ್ರವರ್ಗ 3ಎ	ಪ್ರವರ್ಗ 3ಬಿ	
1	**ಸಂಪಾದಕರು,** ವೇತನ ಶ್ರೇಣಿ ರೂ.52650–97100	01	–	–	–	–	–	–	–	01
	ಸಾಮಾನ್ಯ ಆಭ್ಯರ್ಥಿ	01	–	–	–	–	–	–	–	01
	ಒಟ್ಟು ಹುದ್ದೆಗಳು	**01**	**–**	**–**	**–**	**–**	**–**	**–**	**–**	**01**

ಸಾರ್ವಜನಿಕ ಸಂಪರ್ಕಾಧಿಕಾರಿ,

ಕ್ರ. ಸಂ	ಹುದ್ದೆಯ ಹೆಸರು ಹಾಗೂ ವೇತನ ಶ್ರೇಣಿ	ಖಾಲಿ ಇರುವ ಸ್ಥಾನಗಳು ಹಾಗೂ ಮೀಸಲಾತಿ ವಿವರಗಳು								ಒಟ್ಟು ಹುದ್ದೆಗಳು
		ಸಾಮಾನ್ಯ	ಪ.ಜಾ	ಪ.ಪಂ	ಪ್ರವರ್ಗ 1	ಪ್ರವರ್ಗ 2ಎ	ಪ್ರವರ್ಗ 2ಬಿ	ಪ್ರವರ್ಗ 3ಎ	ಪ್ರವರ್ಗ 3ಬಿ	
1	**ಸಾರ್ವಜನಿಕ ಸಂಪರ್ಕಾಧಿಕಾರಿ,** ವೇತನ ಶ್ರೇಣಿ ರೂ.43100–83900	01	–	–	–	–	–	–	–	01
	ಸಾಮಾನ್ಯ ಆಭ್ಯರ್ಥಿ	01	–	–	–	–	–	–	–	01
	ಒಟ್ಟು ಹುದ್ದೆಗಳು	**01**	**–**	**–**	**–**	**–**	**–**	**–**	**–**	**01**

for more job news: www.kpscvaani.com

ಉಪನ್ಯಾಸಕರು

ಕ್ರ. ಸಂ	ಹುದ್ದೆಯ ಹೆಸರು ಹಾಗೂ ವೇತನ ಶ್ರೇಣಿ	ಖಾಲಿ ಇರುವ ಸ್ಥಾನಗಳು ಹಾಗೂ ಮೀಸಲಾತಿ ವಿವರಗಳು								ಒಟ್ಟು ಹುದ್ದೆಗಳು
		ಸಾಮಾನ್ಯ	ಪ.ಜಾ	ಪ.ಪಂ	ಪ್ರವರ್ಗ 1	ಪ್ರವರ್ಗ 2ಎ	ಪ್ರವರ್ಗ 2ಬಿ	ಪ್ರವರ್ಗ 3ಎ	ಪ್ರವರ್ಗ 3ಬಿ	
3	**ಉಪನ್ಯಾಸಕರು,** ವೇತನ ಶ್ರೇಣಿ ರೂ.33450–62600	**–**	**02**	**–**	**–**	**01**	**–**	**–**	**–**	**03**
	ಸಾಮಾನ್ಯ ಅಭ್ಯರ್ಥಿ	–	–	–	–	–	–	–	–	–
	ಮಹಿಳಾ ಅಭ್ಯರ್ಥಿ	–	–	–	–	–	–	–	–	–
	ಗ್ರಾಮೀಣ ಅಭ್ಯರ್ಥಿ	–	01	–	–	–	–	–	–	01
	ಕನ್ನಡ ಮಾಧ್ಯಮ	–	–	–	–	–	–	–	–	–
	ಯೋಜನಾ ನಿರಾಶ್ರಿತರು	–	–	–	–	–	–	–	–	–
	ಮಾಜಿ ಸೈನಿಕರು	–	–	–	–	–	–	–	–	–
	ಅಂಗವಿಕಲರು	–	01	–	–	01	–	–	–	02
	ಒಟ್ಟು ಹುದ್ದೆಗಳು	**–**	**02**	**–**	**–**	**01**	**–**	**–**	**–**	**03**

ಜಿಲ್ಲಾ ಸಹಕಾರ ಶಿಕ್ಷಕರು

ಕ್ರ. ಸಂ	ಹುದ್ದೆಯ ಹೆಸರು ಹಾಗೂ ವೇತನ ಶ್ರೇಣಿ	ಖಾಲಿ ಇರುವ ಸ್ಥಾನಗಳು ಹಾಗೂ ಮೀಸಲಾತಿ ವಿವರಗಳು								ಒಟ್ಟು ಹುದ್ದೆಗಳು
		ಸಾಮಾನ್ಯ	ಪ.ಜಾ	ಪ.ಪಂ	ಪ್ರವರ್ಗ 1	ಪ್ರವರ್ಗ 2ಎ	ಪ್ರವರ್ಗ 2ಬಿ	ಪ್ರವರ್ಗ 3ಎ	ಪ್ರವರ್ಗ 3ಬಿ	
4	**ಜಿಲ್ಲಾ ಸಹಕಾರ ಶಿಕ್ಷಕರು,** ವೇತನ ಶ್ರೇಣಿ ರೂ.27650–52650	**01**	**01**	**–**	**–**	**01**	**–**	**–**	**01**	**04**
	ಸಾಮಾನ್ಯ ಅಭ್ಯರ್ಥಿ	01	–	–	–	01	–	–	–	02
	ಮಹಿಳಾ ಅಭ್ಯರ್ಥಿ	–	–	–	–	–	–	–	01	01
	ಗ್ರಾಮೀಣ ಅಭ್ಯರ್ಥಿ	–	–	–	–	–	–	–	–	–
	ಕನ್ನಡ ಮಾಧ್ಯಮ	–	–	–	–	–	–	–	–	–
	ಯೋಜನಾ ನಿರಾಶ್ರಿತರು	–	–	–	–	–	–	–	–	–
	ಮಾಜಿ ಸೈನಿಕರು	–	–	–	–	–	–	–	–	–
	ಅಂಗವಿಕಲರು	–	01	–	–	–	–	–	–	01
	ಒಟ್ಟು ಹುದ್ದೆಗಳು	**01**	**01**	**–**	**–**	**02**	**–**	**–**	**01**	**04**

ಮಹಿಳಾ ಸಹಕಾರ ಶಿಕ್ಷಕಿಯರು

ಕ್ರ. ಸಂ	ಹುದ್ದೆಯ ಹೆಸರು ಹಾಗೂ ವೇತನ ಶ್ರೇಣಿ	ಖಾಲಿ ಇರುವ ಸ್ಥಾನಗಳು ಹಾಗೂ ಮೀಸಲಾತಿ ವಿವರಗಳು								ಒಟ್ಟು ಹುದ್ದೆಗಳು
		ಸಾಮಾನ್ಯ	ಪ.ಜಾ	ಪ.ಪಂ	ಪ್ರವರ್ಗ 1	ಪ್ರವರ್ಗ 2ಎ	ಪ್ರವರ್ಗ 2ಬಿ	ಪ್ರವರ್ಗ 3ಎ	ಪ್ರವರ್ಗ 3ಬಿ	
5	**ಮಹಿಳಾ ಸಹಕಾರ ಶಿಕ್ಷಕಿಯರು,** ವೇತನ ಶ್ರೇಣಿ ರೂ.27650–	–	–	–	–	–	01	–	–	**01**

for more job news: www.kpscvaani.com

	52650									
	ಸಾಮಾನ್ಯ ಅಭ್ಯರ್ಥಿ	–	–	–	–	–	01	–	–	01
	ಒಟ್ಟು ಹುದ್ದೆಗಳು	**–**	**–**	**–**	**–**	**–**	**01**	**–**	**–**	**01**

ಶೀಘ್ರಲಿಪಿಗಾರರು

ಕ್ರ. ಸಂ	ಹುದ್ದೆಯ ಹೆಸರು ಹಾಗೂ ವೇತನ ಶ್ರೇಣಿ	ಖಾಲಿ ಇರುವ ಸ್ಥಾನಗಳು ಹಾಗೂ ಮೀಸಲಾತಿ ವಿವರಗಳು								ಒಟ್ಟು ಹುದ್ದೆಗಳು
		ಸಾಮಾನ್ಯ	ಪ.ಜಾ	ಪ.ಪಂ	ಪ್ರವರ್ಗ 1	ಪ್ರವರ್ಗ 2ಎ	ಪ್ರವರ್ಗ 2ಬಿ	ಪ್ರವರ್ಗ 3ಎ	ಪ್ರವರ್ಗ 3ಬಿ	
8	**ಶೀಘ್ರಲಿಪಿಗಾರರು,** ವೇತನ ಶ್ರೇಣಿ ರೂ.27650–52650	01	01	–	–	–	–	–	–	**02**
	ಸಾಮಾನ್ಯ ಅಭ್ಯರ್ಥಿ	01	01	–	–	–	–	–	–	02
	ಮಹಿಳಾ ಅಭ್ಯರ್ಥಿ	–	–	–	–	–	–		–	–
	ಒಟ್ಟು ಹುದ್ದೆಗಳು	**01**	**01**	**–**	**–**	**–**	**–**	**–**	**–**	**02**

ಗ್ರಂಥಾಲಯ ಸಹಾಯಕರು

ಕ್ರ. ಸಂ	ಹುದ್ದೆಯ ಹೆಸರು ಹಾಗೂ ವೇತನ ಶ್ರೇಣಿ	ಖಾಲಿ ಇರುವ ಸ್ಥಾನಗಳು ಹಾಗೂ ಮೀಸಲಾತಿ ವಿವರಗಳು								ಒಟ್ಟು ಹುದ್ದೆಗಳು
		ಸಾಮಾನ್ಯ	ಪ.ಜಾ	ಪ.ಪಂ	ಪ್ರವರ್ಗ 1	ಪ್ರವರ್ಗ 2ಎ	ಪ್ರವರ್ಗ 2ಬಿ	ಪ್ರವರ್ಗ 3ಎ	ಪ್ರವರ್ಗ 3ಬಿ	
9	**ಗ್ರಂಥಾಲಯ ಸಹಾಯಕರು,** ವೇತನ ಶ್ರೇಣಿ ರೂ.27650–52650	01	–	–	–	–	–	–	–	01
	ಸಾಮಾನ್ಯ ಅಭ್ಯರ್ಥಿ	01	–	–	–	–	–	–	–	01
	ಒಟ್ಟು ಹುದ್ದೆಗಳು	**01**	**–**	**–**	**–**	**–**	**–**	**–**	**–**	**01**

ವರದಿಗಾರರು

[

ಕ್ರ. ಸಂ	ಹುದ್ದೆಯ ಹೆಸರು ಹಾಗೂ ವೇತನ ಶ್ರೇಣಿ	ಖಾಲಿ ಇರುವ ಸ್ಥಾನಗಳು ಹಾಗೂ ಮೀಸಲಾತಿ ವಿವರಗಳು								ಒಟ್ಟು ಹುದ್ದೆಗಳು
		ಸಾಮಾನ್ಯ	ಪ.ಜಾ	ಪ.ಪಂ	ಪ್ರವರ್ಗ 1	ಪ್ರವರ್ಗ 2ಎ	ಪ್ರವರ್ಗ 2ಬಿ	ಪ್ರವರ್ಗ 3ಎ	ಪ್ರವರ್ಗ 3ಬಿ	
10	**ವರದಿಗಾರರು,** ವೇತನ ಶ್ರೇಣಿ ರೂ.27650–52650	–	–	01	–	–	–	–	–	**01**
	ಸಾಮಾನ್ಯ ಅಭ್ಯರ್ಥಿ	–	–	01	–	–	–	–	–	01
	ಒಟ್ಟು ಹುದ್ದೆಗಳು	**–**	**–**	**01**	**–**	**–**	**–**	**–**	**–**	**01**

ಸ್ವಾಗತಕಾರರು

ಕ್ರ. ಸಂ	ಹುದ್ದೆಯ ಹೆಸರು ಹಾಗೂ ವೇತನ ಶ್ರೇಣಿ	ಖಾಲಿ ಇರುವ ಸ್ಥಾನಗಳು ಹಾಗೂ ಮೀಸಲಾತಿ ವಿವರಗಳು								ಒಟ್ಟು ಹುದ್ದೆಗಳು
		ಸಾಮಾನ್ಯ	ಪ.ಜಾ	ಪ.ಪಂ	ಪ್ರವರ್ಗ 1	ಪ್ರವರ್ಗ 2ಎ	ಪ್ರವರ್ಗ 2ಬಿ	ಪ್ರವರ್ಗ 3ಎ	ಪ್ರವರ್ಗ 3ಬಿ	
11	**ಸ್ವಾಗತಕಾರರು,** ವೇತನ ಶ್ರೇಣಿ ರೂ.21400–42000	01	–	–		–	–	–	–	01
	ಸಾಮಾನ್ಯ ಅಭ್ಯರ್ಥಿ	01	–	–	–	–	–	–	–	01
	ಒಟ್ಟು ಹುದ್ದೆಗಳು	**01**	**–**	**–**	**–**	**–**	**–**	**–**	**–**	**01**

for more job news: www.kpscvaani.com

1) ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭಿಕ ದಿನಾಂಕ:15.02.2019

2) ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:16.03.2019

3) ಅರ್ಜಿ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ:18.03.2019

ಇ–ಅಂಚೆ ಕಛೇರಿಯ ಕಾರ್ಯದ ವೇಳೆಯೊಳಗೆ ಮಾತ್ರ.

ಅರ್ಜಿಗಳನ್ನು ON LINE ಮೂಲಕ ಭರ್ತಿ ಮಾಡಿ ಅರ್ಜಿ ಶುಲ್ಕವನ್ನು **ಇ–ಅಂಚೆ ಕಛೇರಿಯ** ಕೆಲಸದ ವೇಳೆಯೊಳಗೆ ಕರ್ನಾಟಕ ರಾಜ್ಯದ ಯಾವುದೇ **ಎಲೆಕ್ಟ್ರಾನಿಕ್ ಅಂಚೆ ಕಛೇರಿಗಳಲ್ಲಿ** (e-Payment Post Offices Only) ಮಾತ್ರ ಸಂದಾಯ ಮಾಡಬಹುದಾಗಿರುತ್ತದೆ. ಇದನ್ನು ಹೊರತುಪಡಿಸಿ ಡಿ.ಡಿ., ಪೋಸ್ಟಲ್ ಆರ್ಡರ್, ಮನಿ ಆರ್ಡರ್, ಇತ್ಯಾದಿ ಮುಖಾಂತರ ಸ್ವೀಕರಿಸಲಾಗುವುದಿಲ್ಲ. ಶುಲ್ಕವನ್ನು ಪಾವತಿಸದೇ ಇರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಅಭ್ಯರ್ಥಿಗಳು ON LINE **ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ವೆಬ್‌ಸೈಟ್** http://kscoopfedltd.org **ನಲ್ಲಿ ನೀಡಿರುವ ಸೂಚನೆಗಳನ್ನು ಕಡ್ಡಾಯವಾಗಿ ಓದಿ ತಿಳಿದುಕೊಳ್ಳತಕ್ಕದ್ದು.**

ವಿಷಯ ಸೂಚನೆ: On-line ಮೂಲಕ ಅರ್ಜಿಯನ್ನು ಭರ್ತಿಮಾಡುವ ಸಂದರ್ಭದಲ್ಲಿ ಯಾವುದಾದರೂ ತಾಂತ್ರಿಕ ತೊಂದರೆ ಅಥವಾ ಸಮಸ್ಯೆ ಎದುರಾದಲ್ಲಿ ಸಹಾಯವಾಣಿ (Help line) **9743740127 / 7483659772** ಮೂಲಕ ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದು.ಅರ್ಜಿಗಳನ್ನು ಆನ್–ಲೈನ್ (On-line) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು, ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ.

ಅರ್ಜಿ ಶುಲ್ಕ.

ವಿವರ	ಪ್ರತಿ ಹುದ್ದೆಗೆ
ಸಾಮಾನ್ಯ ಅರ್ಹತೆ, ಪ್ರವರ್ಗ 2(ಎ), 2(ಬಿ), 3(ಎ), 3(ಬಿ)ಗೆ ಸೇರಿದ ಅಭ್ಯರ್ಥಿಗಳಿಗೆ	ರೂ.500.00
ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ– 1	ರೂ.250.00
ಅಂಗವಿಕಲ ಅಭ್ಯರ್ಥಿಗಳಿಗೆ ಶುಲ್ಕ ವಿನಾಯಿತಿ ಇದೆ. (ಶೇ.40ಕ್ಕಿಂತ ಹೆಚ್ಚು ಅಂಗವಿಕಲತೆ ಹೊಂದಿರುವವರು ಮತ್ತು ಅದಕ್ಕೆ ಸಂಬಂಧಿಸಿದಂತೆ ಜಿಲ್ಲಾ ವೈದ್ಯಾಧಿಕಾರಿಗಳಿಂದ ಪ್ರಮಾಣ ಪತ್ರ ಹೊಂದಿರುವವರು)	
ಅಂಚೆ ಕಛೇರಿಯ ಸೇವಾ ಶುಲ್ಕದ ಮೊತ್ತವನ್ನು ಅರ್ಜಿ ಶುಲ್ಕದೊಂದಿಗೆ ಪಾವತಿಸತಕ್ಕದ್ದು.	

for more job news: www.kpscvaani.com

ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂತಿರುಗಿಸಲಾಗುವುದಿಲ್ಲ ಅಥವಾ ಅದನ್ನು ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳವು ನಡೆಸುವ ಇತರೆ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಶುಲ್ಕವನ್ನು ಸಂದಾಯ ಮಾಡದಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಅರ್ಹತಾ ಷರತ್ತುಗಳು.

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

ಇ) ಅಭ್ಯರ್ಥಿಗಳು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟುಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

ಶೈಕ್ಷಣಿಕ ವಿದ್ಯಾರ್ಹತೆ.

(I) ಸಂಪಾದಕರು:– ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಪತ್ರಿಕೋದ್ಯಮದಲ್ಲಿ ಪದವಿಯನ್ನು ಪಡೆದಿರಬೇಕು. ಪತ್ರಿಕೋದ್ಯಮದ ಕ್ಷೇತ್ರದಲ್ಲಿ 10 ವರ್ಷಗಳ ಸೇವೆ ಸಲ್ಲಿಸಿ ಈ ಅವಧಿಯಲ್ಲಿ ಕನಿಷ್ಟ 5 ವರ್ಷಗಳು ಸಹಕಾರಿ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ಅನುಭವ ಹೊಂದಿರತಕ್ಕದ್ದು. ಜಿ.ಡಿ.ಸಿ./ಡಿ.ಸಿ.ಎಂ. ತರಬೇತಿ ಮತ್ತು ಕಂಪ್ಯೂಟರ್‌ನಲ್ಲಿ ತರಬೇತಿ ಪಡೆದವರಿಗೆ ಪ್ರಾಶಸ್ತ್ಯ ನೀಡಲಾಗುವುದು.

(II) ಸಾರ್ವಜನಿಕ ಸಂಪರ್ಕಾಧಿಕಾರಿ:– ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಮಾಸ್ ಕಂಮ್ಯೂನಿಕೇಷನ್‌ನಲ್ಲಿ ಸ್ನಾತಕೋತ್ತರ ಪದವೀಧರರಾಗಿರಬೇಕು. ಕನಿಷ್ಠ 5 ವರ್ಷಗಳು ಸಾರ್ವಜನಿಕ ಸಂಪರ್ಕಾಧಿಕಾರಿ ಕೆಲಸಗಳು ನಿರ್ವಹಿಸಿದ ಮತ್ತು ಈ ಅವಧಿಯಲ್ಲಿ ಕನಿಷ್ಠ 2 ವರ್ಷಗಳು ಸಹಕಾರಿ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ಅನುಭವ ಹೊಂದಿರತಕ್ಕದ್ದು. ಜಿ.ಡಿ.ಸಿ./ಡಿ.ಸಿ.ಎಂ. ತರಬೇತಿ ಮತ್ತು ಕಂಪ್ಯೂಟರ್‌ನಲ್ಲಿ ತರಬೇತಿ ಪಡೆದವರಿಗೆ ಪ್ರಾಶಸ್ತ್ಯ ನೀಡಲಾಗುವುದು.

(III) ಉಪನ್ಯಾಸಕರು:– ಅರ್ಥಶಾಸ್ತ್ರ/ಕಾನೂನು/ವಾಣಿಜ್ಯ ಶಾಸ್ತ್ರ/ಸಹಕಾರ ಇವುಗಳಲ್ಲಿ ಯಾವುದಾದರೂ ಒಂದು ವಿಷಯದಲ್ಲಿ ಅಂಗೀಕೃತ ವಿಶ್ವವಿದ್ಯಾಲಯದಿಂದ ಸ್ನಾತಕೋತ್ತರ ಪದವಿಯನ್ನು ಪಡೆದಿರಬೇಕು. ಬೋಧನೆಯಲ್ಲಿ ಮುಖ್ಯವಾಗಿ ಸಹಕಾರ, ಅರ್ಥಶಾಸ್ತ್ರ ಹಾಗೂ ವಾಣಿಜ್ಯ ಶಾಸ್ತ್ರದಲ್ಲಿ ಅನುಭವ ಪಡೆದವರಿಗೆ ಅದ್ಯತೆ ನೀಡಲಾಗುವುದು. ಜೊತೆಗೆ ಜಿ.ಡಿ.ಸಿ./ಡಿ.ಸಿ.ಎಂ. ತರಬೇತಿ ಮತ್ತು ಕಂಪ್ಯೂಟರ್‌ನಲ್ಲಿ ತರಬೇತಿ ಪಡೆದವರಿಗೆ ಪ್ರಾಶಸ್ತ್ಯ ನೀಡಲಾಗುವುದು.

(IV) ಜಿಲ್ಲಾ ಸಹಕಾರ ಶಿಕ್ಷಕರು:– ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಪದವಿಯನ್ನು ಪಡೆದವರಾಗಿರಬೇಕು. ಸಹಕಾರ ಕ್ಷೇತ್ರದಲ್ಲಿ ಅನುಭವವನ್ನು ಪಡೆದವರಿಗೆ ಮತ್ತು ಜಿ.ಡಿ.ಸಿ./ಡಿ.ಸಿ.ಎಂ. ತರಬೇತಿ ಮಾಡಿರುವವರಿಗೆ ಹಾಗೂ ಕಂಪ್ಯೂಟರ್‌ನಲ್ಲಿ ತರಬೇತಿ ಪಡೆದವರಿಗೆ ಆದ್ಯತೆ ನೀಡಲಾಗುವುದು.

for more job news: www.kpscvaani.com

(V) ಮಹಿಳಾ ಸಹಕಾರ ಶಿಕ್ಷಕಿಯರು:– ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಪದವಿಯನ್ನು ಪಡೆದವರಾಗಿರಬೇಕು. ಸಹಕಾರ ಕ್ಷೇತ್ರದಲ್ಲಿ ಅನುಭವವನ್ನು ಪಡೆದವರಿಗೆ ಮತ್ತು ಜಿ.ಡಿ.ಸಿ./ಡಿ.ಸಿ.ಎಂ. ತರಬೇತಿ ಮಾಡಿರುವವರಿಗೆ ಹಾಗೂ ಕಂಪ್ಯೂಟರ್‌ನಲ್ಲಿ ತರಬೇತಿ ಪಡೆದವರಿಗೆ ಆದ್ಯತೆ ನೀಡಲಾಗುವುದು

(VI) ಶೀಘ್ರಲಿಪಿಗಾರರು:– ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಪದವಿಯೊಂದಿಗೆ ಬೋರ್ಡ್ ಆಫ್ ಕಮರ್ಷಿಯಲ್ ಎಗ್ಜಾಮಿನೇಷನ್ಸ್‌ನಿಂದ ಕನ್ನಡ ಮತ್ತು ಇಂಗ್ಲೀಷ್ ಭಾಷೆಯಲ್ಲಿ ಸೀನಿಯರ್ ಟೈಪ್‌ರೈಟಿಂಗ್ ಹಾಗೂ ಸೀನಿಯರ್ ಶೀಘ್ರಲಿಪಿಗಾರರ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.

(VII) ಗ್ರಂಥಾಲಯ ಸಹಾಯಕರು:– ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಬಿ.ಲಿಬ್. ಪದವಿ ಪಡೆದಿರಬೇಕು ಹಾಗೂ ಕಂಪ್ಯೂಟರ್‌ನಲ್ಲಿ ತರಬೇತಿ ಪಡೆದವರಿಗೆ ಆದ್ಯತೆ ನೀಡಲಾಗುವುದು.

(VIII) ವರದಿಗಾರರು:– ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಪತ್ರಿಕೋದ್ಯಮದಲ್ಲಿ ಪದವಿಯನ್ನು ಪಡೆದಿರಬೇಕು ಹಾಗೂ ಜಿ.ಡಿ.ಸಿ./ಡಿ.ಸಿ.ಎಂ. ತರಬೇತಿ ಹಾಗೂ ಕಂಪ್ಯೂಟರ್ ತರಬೇತಿ ಪಡೆದವರಿಗೆ ಆದ್ಯತೆ ನೀಡಲಾಗುವುದು. ಪತ್ರಿಕೋದ್ಯಮದಲ್ಲಿ ಕನಿಷ್ಠ ಐದು ವರ್ಷಗಳ ಅನುಭವವನ್ನು ಪಡೆದವರಿಗೆ ಅಧ್ಯತೆ ನೀಡಲಾಗುವುದು.

(IX) ಸ್ವಾಗತಕಾರರು ಹುದ್ದೆಗೆ ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಪದವಿ ಪಡೆದಿರಬೇಕು. ಜೊತೆಗೆ ಜಿ.ಡಿ.ಸಿ./ಡಿ.ಸಿ.ಎಂ. ತರಬೇತಿ ಹಾಗೂ ಕಂಪ್ಯೂಟರ್ ತರಬೇತಿ ಪಡೆದವರಿಗೆ ಆದ್ಯತೆ ನೀಡಲಾಗುವುದು.

ವಯೋಮಿತಿ.

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು;

ಅ) ಕನಿಷ್ಠ – 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು ಹಾಗೂ

ಆ) ಗರಿಷ್ಠ□~ ವಯೋಮಿತಿಯನ್ನು ಮೀರಿರಬಾರದು.

ಅಭ್ಯರ್ಥಿಗಳು	ಗರಿಷ್ಠ ~ ವಯೋಮಿತಿ.
ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳಿಗೆ	35 ವರ್ಷ
ಪ್ರವರ್ಗ 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳಿಗೆ	38 ವರ್ಷ
ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ /ಪ್ರವರ್ಗ–1 ಅಭ್ಯರ್ಥಿಗಳಿಗೆ	40 ವರ್ಷ

ಲಿಖಿತ ಪರೀಕ್ಷೆ / ಸಂದರ್ಶನದ ದಿನಾಂಕವನ್ನು ಮುಂದೆ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ವೆಬ್ ಸೈಟ್ http://kscoopfedltd.org ನಲ್ಲಿ ಪ್ರಕಟಿಸಲಾಗುವುದು. ಲಿಖಿತ ಪರೀಕ್ಷೆ / ಸಂದರ್ಶನದ ದಿನಾಂಕವನ್ನು ಅಧಿಸೂಚಿಸಿದಾಗ ಪ್ರವೇಶ ಪತ್ರಗಳನ್ನು ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಅಂತರ್ಜಾಲದಿಂದ ಅಭ್ಯರ್ಥಿಗಳು ಡೌನ್‌ಲೋಡ್ ಮಾಡಿಕೊಳ್ಳಬೇಕು. ಅಭ್ಯರ್ಥಿಗಳಿಗೆ ಪ್ರವೇಶ ಪತ್ರಗಳನ್ನು ಪ್ರತ್ಯೇಕವಾಗಿ ರವಾನಿಸಲಾಗುವುದಿಲ್ಲ.

ಜಾತಿ ಮೀಸಲಾತಿ ಪ್ರಮಾಣ ಪತ್ರಗಳು.

ಜಾತಿ ಮೀಸಲಾತಿ ಕೋರಬಯಸುವ:

1. ಪ.ಜಾ/ಪ.ಪಂ. ಅಭ್ಯರ್ಥಿಗಳು ನಮೂನೆ 'ಡಿ' ರಲ್ಲಿ

for more job news: www.kpscvaani.com

2. ಪ್ರವರ್ಗ–1ರ ಅಭ್ಯರ್ಥಿಗಳು ನಮೂನೆ 'ಇ' ನಲ್ಲಿ

3. 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ 'ಎಫ್' ನಲ್ಲಿ ಸಂಬಂಧಿತ ತಹಶೀಲ್ದಾರರವರಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು. ಈ ಪ್ರಮಾಣ ಪತ್ರವು, ಈ ಹುದ್ದೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು ಹಾಗೂ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು. ಅಂದರೆ, ಹಿಂದುಳಿದ ವರ್ಗಗಳ ಪ್ರ-ೆ 2ಎ, ಪ್ರ–2ಬಿ, ಪ್ರ–3ಎ ಮತ್ತು ಪ್ರ–3ಬಿ ವರ್ಗದ ಮೀಸಲಾತಿ ಪ್ರಮಾಣ ಪತ್ರಗಳನ್ನು ಪಡೆದ ದಿನಾಂಕದಿಂದ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಇರಬೇಕು.

ಗ್ರಾಮೀಣ ಅಭ್ಯರ್ಥಿ.

1. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ 1ರಿಂದ 10ನೇ ತರಗತಿ ಯವರೆಗೆ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಈ ಪ್ರಮಾಣ ಪತ್ರಗಳು ಅರ್ಜಿ ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು ಮತ್ತು ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

2. ಗ್ರಾಮೀಣ ಮೀಸಲಾತಿಯನ್ನು ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ, 3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ನಮೂನೆ 2 ರಲ್ಲಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

3. ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ–2 ರ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ–1 ರಲ್ಲಿ ಅವರು ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಪ್ರಮಾಣ ಪತ್ರವನ್ನು ಸಂಬಂಧಿಸಿದ ತಹಶೀಲ್ದಾರ್ ರವರಿಂದ ಪಡೆದಿರತಕ್ಕದ್ದು.

4. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ, 3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ.

ಸೂಚನೆ.

ಗ್ರಾಮೀಣ ಮೀಸಲಾತಿಗೆ ಸಂಬಂಧಿಸಿದಂತೆ ನಮೂನೆ–2 ರಲ್ಲಿಯ ಪ್ರಮಾಣ ಪತ್ರವನ್ನು ಅಭ್ಯರ್ಥಿಗಳು ತಾವು ವ್ಯಾಸಂಗ ಮಾಡಿದ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಅದಕ್ಕೆ ಸಂಬಂಧಿತ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡೆದಿರತಕ್ಕದ್ದು.

ಕನ್ನಡ ಮಾಧ್ಯಮ ಅಭ್ಯರ್ಥಿ.

for more job news: www.kpscvaani.com

ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರ ಪಡೆದಿರಬೇಕು.

ಯೋಜನಾ ನಿರಾಶ್ರಿತ ಅಭ್ಯರ್ಥಿ.

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 74 ಸೆನೆನಿ 99, ದಿನಾಂಕ: 23–11–2000 ರನ್ವಯ ಯೋಜನೆಗಳಿಂದ ನಿರ್ವಸಿತರಾದ (ಈ ನಿಯಮಗಳು ಜಾರಿಯಾಗುವ 20 ವರ್ಷಕ್ಕೆ ಮುನ್ನ ನಿರ್ವಸತಿತರಾದ ಕುಟುಂಬದ ಅಭ್ಯರ್ಥಿಗಳು ಈ ಮೀಸಲಾತಿಗೆ ಅನ್ವಯವಾಗುವುದಿಲ್ಲ) ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರ್ ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಪಡೆದಿರಬೇಕು.

ಅಂಗವಿಕಲ ಅಭ್ಯರ್ಥಿ.

ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ಉಪನಿಯಮ 2(ಕೆ)(ii)ರಲ್ಲಿ ನಿರ್ದಿಷ್ಟಪಡಿಸಿರುವ ಕ್ರಮ ಸಂಖ್ಯೆ i ರಿಂದ vii ರವರೆಗಿನ (Blind, Low vision, Leprosy cured, Hearing impairment, Locomotor disability, Mental retardation & Mental illness) ವೈಕಲ್ಯತೆಯ ಶೇ.40ಕ್ಕೆ ಕಡಿಮೆಯಿಲ್ಲದಿರುವ ಅಂಗವಿಕಲ ವ್ಯಕ್ತಿಗಳು. ಅಂಗವಿಕಲರಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ದಿನಾಂಕ:19–11–2005ರ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:ಸಿಆಸುಇ 115 ಸೆನೆನಿ 2005 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾಮಟ್ಟದ ವೈದ್ಯಕೀಯ ಮಂಡಳಿಯಿಂದ ವೈದ್ಯಕೀಯ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು. ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರವನ್ನು ಪರಿಗಣಿಸುವುದಿಲ್ಲ.

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 74 ಸೆನೆನಿ 2006, ದಿನಾಂಕ:30–10–2007 ರಲ್ಲಿ ಅಂಧ/ದೃಷ್ಟಿ ಮಾಂದ್ಯ ಅಂಗವಿಕಲತೆಯ ಮೀಸಲಾತಿ ಕೋರಿದ್ದಲ್ಲಿ, ನೇಮಕಾತಿ ಸಮಿತಿ ವೈದ್ಯಕೀಯ ಸಮಿತಿಯನ್ನು ರಚಿಸಿ, ವೈದ್ಯಕೀಯ ಪರೀಕ್ಷೆಯಲ್ಲಿ ಅಂತಹ ಅಭ್ಯರ್ಥಿಗಳ ಅಂಧ/ದೃಷ್ಟಿ ಮಾಂದ್ಯತೆಯನ್ನು ಪರೀಕ್ಷಿಸಿ ಖಚಿತಪಡಿಸಿಕೊಳ್ಳಬೇಕೆಂದು ನಿರ್ದಿಷ್ಟಪಡಿಸಿದ್ದು, ಅದರಂತೆ ನೇಮಕಾತಿ ಸಮಿತಿಯು ಪರೀಕ್ಷಾ ಪೂರ್ವ ಅಥವಾ ಪರೀಕ್ಷೋತ್ತರದ ನಂತರ ನಡೆಸುವ ವೈದ್ಯಕೀಯ ಪರೀಕ್ಷೆಯ ಅಂತಿಮ ವರದಿಗೆ ಅಂಧ/ದೃಷ್ಟಿಮಾಂದ್ಯ ಅಭ್ಯರ್ಥಿಗಳ ಮೀಸಲಾತಿಯು ಬದ್ಧವಾಗಿರುತ್ತದೆ.

ಸೂಚನೆ:

ಈ ಮೇಲಿನ ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು ಹಾಗೂ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು. ಈ ಮೇಲೆ ನಮೂದಿಸಿರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ. ಪ್ರಮಾಣ ಪತ್ರಗಳನ್ನು ನೇಮಕಾತಿ ಪ್ರಾಧಿಕಾರ ಪರಿಶೀಲಿಸುವ ಸಂದರ್ಭದಲ್ಲಿ ತಪ್ಪದೆ ಹಾಜರುಪಡಿಸತಕ್ಕದ್ದು. ಇದಕ್ಕೆ ಹೆಚ್ಚಿನ ಕಾಲಾವಕಾಶ

for more job news: www.kpscvaani.com

ನೀಡಲಾಗುವುದಿಲ್ಲ. ಅರ್ಹತೆ, ಮೀಸಲಾತಿ ಇತ್ಯಾದಿಗಳ ಬಗ್ಗೆ ಅಭ್ಯರ್ಥಿಯು ಖಾತ್ರಿಪಡಿಸಿಕೊಂಡು ಅರ್ಜಿ ಸಲ್ಲಿಸುವುದು ಅವರ ವೈಯಕ್ತಿಕ ಜವಾಬ್ದಾರಿಯಾಗಿರುತ್ತದೆ. ತಪ್ಪು ಮಾಹಿತಿ ನೀಡಿದ್ದಲ್ಲಿ ನೇಮಕಾತಿಗೆ ಅರ್ಹರಾಗುವುದಿಲ್ಲ.

ಆಯ್ಕೆ ವಿಧಾನ.

ಆನ್–ಲೈನ್ ಮೂಲಕ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಪ್ರತಿಯೊಂದು ಹುದ್ದೆಗೆ ನಿಗಧಿಪಡಿಸಿರುವ ವಿದ್ಯಾರ್ಹತೆಯೊಂದಿಗೆ ಸಲ್ಲಿಸಿದ ಅರ್ಹ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷಗೆ ಆಹ್ವಾನಿಸಲಾಗುವುದು. ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಶೇಕಡ 85ಕ್ಕೆ ಮಿತಿಗೊಳಿಸಿ, ಮೌಖಿಕ (ಸಂದರ್ಶನ) ಪರೀಕ್ಷೆಯನ್ನು ಶೇಕಡ 15ಕ್ಕೆ ಮಿತಿಗೊಳಿಸಿ, ನೇಮಕಾತಿ ಮಾಡಿಕೊಳ್ಳಲಾಗುವುದು.

ಹುದ್ದೆಗೆ ನಿಗಧಿಪಡಿಸಿರುವ ವಿದ್ಯಾರ್ಹತೆಯಲ್ಲಿ ಸಾಮಾನ್ಯ ಅಭ್ಯರ್ಥಿಗಳು/ಪ್ರವರ್ಗ 1 / ಪ್ರವರ್ಗ 2(ಎ) / ಪ್ರವರ್ಗ 2(ಬಿ) / ಪ್ರವರ್ಗ 3(ಎ) / ಪ್ರವರ್ಗ 3(ಬಿ) ಅಭ್ಯರ್ಥಿಗಳು ಶೇಕಡ 60 ರಷ್ಟು ಅಂಕಗಳನ್ನು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಶೇಕಡ 50 ರಷ್ಟು ಅಂಕಗಳನ್ನು ಪಡೆದಿರುವವರು ಮಾತ್ರ ಅರ್ಜಿ ಸಲ್ಲಿಸಲು ಅರ್ಹತೆ ಹೊಂದಿರುತ್ತಾರೆ.

ಸಂಪಾದಕರು, ಸಾರ್ವಜನಿಕ ಸಂಪರ್ಕಾಧಿಕಾರಿ, ಉಪನ್ಯಾಸಕರು, ಜಿಲ್ಲಾ ಸಹಕಾರ ಶಿಕ್ಷಕರು, ಮಹಿಳಾ ಸಹಕಾರ ಶಿಕ್ಷಕರು, ಗ್ರಂಥಾಲಯ ಸಹಾಯಕರು, ವರದಿಗಾರರು ಮತ್ತು ಸ್ವಾಗತಕಾರರು ಈ ಹುದ್ದೆಗಳ ಆಯ್ಕೆ ಕುರಿತ ಸ್ಪರ್ಧಾತ್ಮಕ ಲಿಖಿತ ಪರೀಕ್ಷೆಯು ಇರುತ್ತದೆ. ಸ್ಪರ್ಧಾತ್ಮಕ ಲಿಖಿತ ಪರೀಕ್ಷೆಯು ಈ ಕೆಳಕಂಡ ವಿಷಯಗಳನ್ನು ಒಳಗೊಂಡಿರುತ್ತದೆ.

ವಿಷಯ	ನಿಗದಿಪಡಿಸಿದ ಅಂಕಗಳು
ಕನ್ನಡ ಭಾಷೆ	50
ಇಂಗ್ಲೀಷ್ ಭಾಷೆ	25
ಸಾಮಾನ್ಯ ಜ್ಞಾನ	25
ಸಹಕಾರ ವಿಷಯ	50
ಭಾರತದ ಸಂವಿಧಾನ	25
ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಧ್ಯೇಯೋದ್ದೇಶ ಕುರಿತು	25

ಶೀಘ್ರ ಲಿಪಿಗಾರರು, ಇವರುಗಳಿಗೆ ಸ್ಪರ್ಧಾತ್ಮಕ ಲಿಖಿತ ಪರೀಕ್ಷೆಯು ಈ ಕೆಳಕಂಡ ವಿಷಯಗಳನ್ನು ಒಳಗೊಂಡಿರುತ್ತದೆ.

ವಿಷಯ	ನಿಗದಿಪಡಿಸಿದ ಅಂಕಗಳು
ಕನ್ನಡ ಭಾಷೆ	50
ಇಂಗ್ಲೀಷ್ ಭಾಷೆ	25
ಸಾಮಾನ್ಯ ಜ್ಞಾನ	25

for more job news: www.kpscvaani.com

ಕಂಪ್ಯೂಟರ್ ಮತ್ತು ಶೀಘ್ರ ಲಿಪಿ ಅಥವಾ ಟೈಪಿಂಗ್ ಜ್ಞಾನ ಕುರಿತ ಪರೀಕ್ಷೆ	100

ಲಿಖಿತ ಪರೀಕ್ಷೆಯಲ್ಲಿ ಆರ್ಹರಾದ ಅಭ್ಯರ್ಥಿಗಳನ್ನು 1 : 5ರ ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯುವುದು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದಲ್ಲಿ ಖಾಲಿ ಇರುವ ಹುದ್ದೆಗಳನ್ನು ಕಡಿತಗೊಳಿಸಲು ಹಾಗೂ ಹೆಚ್ಚುವರಿ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳುವ ಸಂಪೂರ್ಣ ಅಧಿಕಾರವನ್ನು ಮಹಾಮಂಡಳವು ಹೊಂದಿರುತ್ತದೆ.

ಪ್ರಮುಖ ಸೂಚನೆಗಳು.

ಅಭ್ಯರ್ಥಿಗಳು ಅನ್‌ಲೈನ್ ಅರ್ಜಿ ಸಲ್ಲಿಸುವುದರಿಂದ ಯಾವುದೇ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸಲು ಅವಕಾಶವಿರುವುದಿಲ್ಲ. ಆದರೆ ಈ ಕೆಳಕಂಡ ಪ್ರಮಾಣ ಪತ್ರಗಳನ್ನು / ದಾಖಲಾತಿಗಳನ್ನು ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಸಿಂಧುವಾಗಿರುವಂತೆ, ನೇಮಕಾತಿ ಸಮಿತಿಯು ಸೂಚಿಸಿದಾಗ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗುವುದು.

1) ಕಡ್ಡಾಯವಾಗಿ ಹಾಜರು ಪಡಿಸಬೇಕಾದ ವಿದ್ಯಾರ್ಹತೆ/ ಜನ್ಮ ದಿನಾಂಕ ಪ್ರಮಾಣ ಪತ್ರಗಳನ್ನು ಹಾಜರು ಪಡಿಸದಿದ್ದಲ್ಲಿ: ಅಭ್ಯರ್ಥಿಯ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

2) ವಿವಿಧ ಮೀಸಲಾತಿ ಕೋರಿ ಹಾಜರು ಪಡಿಸಬೇಕಾದ ಪ್ರಮಾಣ ಪತ್ರಗಳನ್ನು ಹಾಜರು ಪಡಿಸದಿದ್ದಲ್ಲಿ ಆ ಮೀಸಲಾತಿಯನ್ನು ರದ್ದು ಪಡಿಸಿ ಸಾಮಾನ್ಯ ಅರ್ಹತೆಯಲ್ಲಿ ಅರ್ಹತೆಯನ್ನು ಹೊಂದಿದ್ದಲ್ಲಿ ಮಾತ್ರ ಸಾಮಾನ್ಯ ಅರ್ಹತೆಯ ಅಭ್ಯರ್ಥಿಯೆಂದು ಪರಿಗಣಿಸಲಾಗುವುದು.

3) ರಾಜ್ಯ ಸರ್ಕಾರಿ / ಕೇಂದ್ರ ಸರ್ಕಾರಿ /ಸ್ಥಳೀಯ ಪ್ರಾಧಿಕಾರ ನೌಕರರು ತಮ್ಮ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣ ಪತ್ರವನ್ನು ಒದಗಿಸಬೇಕು ಇಲ್ಲದಿದ್ದಲ್ಲಿ ಅಭ್ಯರ್ಥಿಯ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

ಕಡ್ಡಾಯವಾಗಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳು.

1. ಈ ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯಾದ ಪದವಿ ವಿದ್ಯಾರ್ಹತೆ ಹೊಂದಿರುವ ಪ್ರಮಾಣ ಪತ್ರಗಳನ್ನು ಅಥವಾ ತತ್ಸಮಾನ ವಿದ್ಯಾರ್ಹತೆಯ ಅಂಕಪಟ್ಟಿಗಳು.

2. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ / ವರ್ಗಾವಣೆಯ ಪ್ರಮಾಣ ಪತ್ರ (ಟಿ.ಸಿ) / ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತಭಾಗ (Extract of Cumulative Record)

3. ವಿವಿಧ ಮೀಸಲಾತಿಗಳನ್ನು ಕೋರಿದ್ದಲ್ಲಿ, ಮೀಸಲಾತಿ ಪ್ರಮಾಣ ಪತ್ರಗಳು.

ಮೀಸಲಾತಿ ಹಾಗೂ ವಯೋಮಿತಿ ರಿಯಾಯಿತಿ ಕೋರಿದ್ದಲ್ಲಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳು.

1. ಸೈನಿಕ ಸೇವೆಯಿಂದ ಬಿಡುಗಡೆಯಾದ/ಮುಕ್ತಿಹೊಂದಿದ ಬಗೆಗಿನ ಪ್ರಮಾಣ ಪತ್ರ

for more job news: www.kpscvaani.com

ಟಿಪ್ಪಣಿ: ಮಾಜಿ ಸೈನಿಕ ಮೀಸಲಾತಿ ಕೋರುವ ಅಭ್ಯರ್ಥಿಗಳು ನಿಯಮಾನುಸಾರ ಅ ಮೀಸಲಾತಿಗೆ ಅರ್ಹರೆ? ಎಂಬುದನ್ನು ಹತ್ತಿರದ ಜಿಲ್ಲಾ ಸೈನಿಕ ಬೋರ್ಡ್‌ನಿಂದ ತಿಳಿದುಕೊಂಡು ಮೀಸಲಾತಿಯನ್ನು ಕೋರುವುದು ಸೂಕ್ತ.

2. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ, ಪ್ರವರ್ಗ–3ಬಿ ಮೀಸಲಾತಿ ಅಭ್ಯರ್ಥಿಗಳು ನಮೂನೆ **ಡಿ/ಇ/ಎಫ್** ನಲ್ಲಿ ತಹಶೀಲ್ದಾರ್‌ರವರಿಂದ ಪಡೆದಿರುವ ಪ್ರಮಾಣ ಪತ್ರ.

3. ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿರುವ ಬಗ್ಗೆ ಅರ್ಜಿಯಲ್ಲಿನ ನಿಗದಿತ ಅಂಕಣವನ್ನು ತುಂಬತಕ್ಕದ್ದು ಹಾಗೂ ಅವರ ಸೇವಾ ಪ್ರಮಾಣ ಪತ್ರ ಮತ್ತು ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಬಗ್ಗೆ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ('No Objection' Certificate) ಸಂಬಂಧಿತ ನೇಮಕಾತಿ ಪ್ರಾಧಿಕಾರದಿಂದ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರಬೇಕು.

4. ಹೈದರಾಬಾದ್–ಕರ್ನಾಟಕ ಪ್ರದೇಶದ ಅಭ್ಯರ್ಥಿಗಳ ಮೀಸಲಾತಿಗೆ ಸಂಬಂಧಿಸಿದ ಅರ್ಹತಾ ಪ್ರಮಾಣಪತ್ರ.

5. ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ–1 ಮತ್ತು 2 ರಲ್ಲಿ

6. ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ.

7. ಅಂಗವಿಕಲ ಅಭ್ಯರ್ಥಿಗಳು ನಿಗಧಿಪಡಿಸಿದ ನಮೂನೆಯಲ್ಲಿ ಪಡೆದ ವೈದ್ಯಕೀಯ ಪ್ರಮಾಣ ಪತ್ರ.

8. ಯೋಜನಾ ನಿರಾಶ್ರಿತ ಅಭ್ಯರ್ಥಿಗಳು, ಇವರುಗಳು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ ಈ ಮೇಲಿನ ಅರ್ಹತೆ, ಮೀಸಲಾತಿ ಇತ್ಯಾದಿಗಳನ್ನು ಕೂಲಂಕೂಶವಾಗಿ ಪರಿಶೀಲಿಸಿದ ನಂತರವೇ ಅಭ್ಯರ್ಥಿಗಳನ್ನು ಅಂಕಗಳ ಜೇಷ್ಠತೆ ಮತ್ತು ಮೀಸಲಾತಿ ಆಧಾರದ ಮೇಲೆ ಆಯ್ಕೆ ಪ್ರಕ್ರಿಯೆಗೆ ಪರಿಗಣಿಸಲಾಗುವುದು.

ಹೆಚ್ಚುವರಿ ಸೂಚನೆಗಳು.

1. ಅಭ್ಯರ್ಥಿಗಳು ON-LINE ಅರ್ಜಿಗಳಲ್ಲಿ ನೀಡುವ ಮಾಹಿತಿಗಳ ಆಧಾರದ ಮೇಲೆ ಅವರುಗಳು ಸ್ಪರ್ಧಾತ್ಮಕ ಪರೀಕ್ಷೆಯನ್ನು ಬರೆಯಲು ಅರ್ಹರೆ ಎಂಬುದನ್ನು ಪರಿಶೀಲಿಸಿ ಮೇಲು ನೋಟಕ್ಕೆ ಅರ್ಹರೆಂದು ಕಂಡುಬಂದ ಅಭ್ಯರ್ಥಿಗಳಿಗೆ ಮಾತ್ರ ಪ್ರವೇಶ ಪತ್ರಗಳನ್ನು ನೀಡಲಾಗುತ್ತದೆ. ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.

2. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಮೀಸಲಾತಿ, ಜನ್ಮ ದಿನಾಂಕ, ವಿದ್ಯಾರ್ಹತೆ, ಪರೀಕ್ಷಾ ಕೇಂದ್ರ ಹಾಗೂ ವಯೋಮಿತಿ ಸಡಿಲಿಕೆ, ಇತ್ಯಾದಿ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು ಹಾಗೂ ಈ ಬಗ್ಗೆ ಆನಂತರದಲ್ಲಿ ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.

3. ಅಪೂರ್ಣವಾಗಿರುವ, ಫೋಟೋ ಮತ್ತು ಸಹಿ ಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

4. ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ ಪ್ರತಿಯನ್ನು ಕಡ್ಡಾಯವಾಗಿ ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.

for more job news: www.kpscvaani.com

ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:–

ಸಾ.ಅ.	ಸಾಮಾನ್ಯ ಅರ್ಹತೆ	GM	General Merit
ಪ.ಜಾ.	ಪರಿಶಿಷ ಜಾತಿ	SC	Scheduled Caste
ಪ.ಪಂ.	ಪರಿಶಿಷ್ಟ ಪಂಗಡ	ST	Scheduled Tribe
ಪ್ರ–1	ಪ್ರವರ್ಗ–1	Cat – 1	Category – I
2ಎ	ಪ್ರವರ್ಗ–2ಎ	2A	Category – 2A
2ಬಿ	ಪ್ರವರ್ಗ–2ಬಿ	2B	Category – 2B
3ಎ	ಪ್ರವರ್ಗ–3ಎ	3A	Category – 3A
3ಬಿ	ಪ್ರವರ್ಗ–3ಬಿ	3B	Category – 3B
ಮಾ.ಸೈ.	ಮಾಜಿ ಸೈನಿಕ	Ex- MP	Ex- Military Person
ಗ್ರಾಮೀಣ	ಗ್ರಾಮೀಣ ಅಭ್ಯರ್ಥಿ	Rural	Rural Candidate
ಕ.ಮಾ.ಅ.	ಕನ್ನಡ ಮಾಧ್ಯಮ ಅಭ್ಯರ್ಥಿ	KMS	Kannada Medium Student
ಯೋ.ಅ.	ಯೋಜನಾ ನಿರಾಶ್ರಿತ ಅಭ್ಯರ್ಥಿ	PDP	Project Displaced Person
ಅಂ.ವಿ.	ಅಂಗವಿಕಲ	PH	Physically Handicapped Person
ಹೈ.ಕ.	ಹೈದರಾಬಾದ್–ಕರ್ನಾಟಕ	H.K.	Hyderabad- Karnataka

ಪ್ರವೇಶ ಪತ್ರ.

ಅಭ್ಯರ್ಥಿಗಳಿಗೆ ಪ್ರವೇಶ ಪತ್ರಗಳನ್ನು ಕಳುಹಿಸುವುದಿಲ್ಲ. ಅಭ್ಯರ್ಥಿಗಳು ಸ್ವತಃ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ವೆಬ್‌ಸೈಟಿನಿಂದ ಲಿಖಿತ ಪರೀಕ್ಷೆ/ಸಂದರ್ಶನದ ಪ್ರವೇಶ ಪತ್ರಗಳನ್ನು Down Load ಮಾಡಿಕೊಂಡು ಲಿಖಿತ ಪರೀಕ್ಷೆ/ಸಂದರ್ಶನಕ್ಕೆ ಹಾಜರಾಗತಕ್ಕದ್ದು.

ಪತ್ರ ವ್ಯವಹಾರ.

ಅಭ್ಯರ್ಥಿತ್ವದ ವಿಚಾರದಲ್ಲಿ ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ಆದಾಗ್ಯೂ ಪರೀಕ್ಷೆಗಾಗಿ ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳುವಲ್ಲಿ ಸಮಸ್ಯೆ ಉಂಟಾದಲ್ಲಿ, ಸಹಾಯವಾಣಿ (Help line) No. 9743740127 / 7483659772 ಸಂಪರ್ಕಿಸತಕ್ಕದ್ದು. ಅಭ್ಯರ್ಥಿಯು ಮಾಹಿತಿಗಾಗಿ ಸಂರ್ಪಕಿಸುವ

for more job news: www.kpscvaani.com

ಸಮಯದಲ್ಲಿ ಈ ಹುದ್ದೆಗಳಿಗೆ ಸಲ್ಲಿಸಿದ ಅರ್ಜಿಯ ಕ್ರಮಸಂಖ್ಯೆ, ಜನ್ಮ ದಿನಾಂಕ, ಕೋರಿದ ಪರೀಕ್ಷಾ ಕೇಂದ್ರ ಇತ್ಯಾದಿ ವಿವರಗಳನ್ನು ನೀಡತಕ್ಕದ್ದು.

ದುರ್ನಡತೆ.

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಹೊಂದಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆ ಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಪರೀಕ್ಷಾ ಕೊಠಡಿಯಲ್ಲಿ ದುರ್ವರ್ತಿಸುತ್ತಿರುವನೆಂಬ ಬಗ್ಗೆ ತಪ್ಪಿತಸ್ಥನೆಂದು ಕಂಡುಬಂದಲ್ಲಿ ಹಾಗೂ ನೀಡಲಾದ ಯಾವುದೇ ಸೂಚನೆಗಳನ್ನು ಉಲ್ಲಂಘಿಸುತ್ತಿರುವನೆಂದು ಅಥವಾ ಅವನು ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ ನೇಮಕಾತಿಗೆ ಅನರ್ಹರಾಗುತ್ತಾರೆ.

ಸಹಿ/–

ವ್ಯವಸ್ಥಾಪಕ ನಿರ್ದೇಶಕರು

for more job news: www.kpscvaani.com